## ಕರ್ನಾಟಕ ಸರ್ಕಾರ

ಸಂಖ್ಯೆ : ಇಡಿ 31 ಪಿಜಿಸಿ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ :22-01-2020.

### ಸುತ್ತೋಲೆ

ವಿಷಯ: ಜಿಲ್ಲಾ ಶಿಕ್ಷಣ ನಿಯಂತ್ರಣ ಪ್ರಾಧಿಕಾರದಲ್ಲಿ ದಾಖಲಾಗುವ ದೂರುಗಳನ್ನು ಕಾಲಮಿತಿಯಲ್ಲಿ ಇತ್ಯರ್ಥಪಡಿಸುವ ಬಗ್ಗೆ.

ಉಲ್ಲೇಖ:
1. ಕರ್ನಾಟಕ ಶಿಕ್ಷಣ ಸಂಸ್ಥೆಗಳ (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯ ಕ್ರಮದ ನಿಗಧಿ ಇತ್ಯಾದಿ)ನಿಯಮಗಳು 1995.
2. ಕರ್ನಾಟಕ ಶಿಕ್ಷಣ ಕಾಯ್ದೆ(2ನೇ ತಿದ್ದುಪಡಿ) 2017 ದಿನಾಂಕ: 22.04.2017.
3. ಕರ್ನಾಟಕ ಉಚ್ಚ ನ್ಯಾಯಾಲಯದ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಂಖ್ಯೆ :28857/2016.

* * * * *

ರಾಜ್ಯದಲಿನ್ನ ಖಾಸಗಿ ಶಾಲೆಗಳಲ್ಲಿ ಪಾರದರ್ಶಕತೆ ಕಾಪಾಡದಿರುವ ಬಗ್ಗೆ ಹಾಗೂ ಶುಲ್ಕಗಳ ಕುರಿತಂತೆ ದಾಖಲಾಗುವ ದೂರುಗಳ ಬಗ್ಗೆ ವಿಚಾರಣೆ ನಡೆಸಲು ಕರ್ನಾಟಕ ಶಿಕ್ಷಣ ಸಂಸ್ಥೆಗಳ (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯ ಕ್ರಮದ ನಿಗಧಿ ಇತ್ಯಾದಿ)ನಿಯಮಗಳು 1995ರಲ್ಲಿ ಅವಕಾಶವಿರುವಂತೆ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಶಿಕ್ಷಣ ನಿಯಂತ್ರಣ ಪ್ರಾಧಿಕಾರ(DERA)ಗಳನ್ನು ರಚಿಸಲಾಗಿರುತ್ತದೆ.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಲಾದ ಪ್ರಾಧಿಕಾರವು (DERA) ವಿಚಾರಣೆಯನ್ನು ನಡೆಸಿ ಪ್ರಕರಣಗಳನ್ನು ಕಾಲಮಿತಿಯಲ್ಲಿ ಇತ್ಯರ್ಥಪಡಿಸಬೇಕಾಗಿರುತ್ತದೆ. ಆದರೆ, ಪ್ರಾಧಿಕಾರದಲ್ಲಿ ದಾಖಲಾಗುವ ಪ್ರಕರಣಗಳನ್ನು ಇತ್ಯರ್ಥಪಡಿಸುವಲ್ಲಿ ವಿಳಂಬವಾಗುತ್ತಿದ್ದು, ಈ ಕುರಿತಂತೆ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ರಿಟ್ ಅರ್ಜಿ ಸಂಖ್ಯೆ:28857/2016(ಸಾರ್ವಜನಿಕ ಹಿತಾಸಕ್ತಿ ಅರ್ಜಿ)ರ ವಿಚಾರಣೆ ವೇಳೆಯಲ್ಲಿ ಮಾನ್ಯ ನ್ಯಾಯಾಲಯವು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ದಿನಾಂಕ:17.12.2019ರ ಮಧ್ಯಂತರ ಆದೇಶವನ್ನು ಈ ಕೆಳಗಿನಂತೆ ನೀಡಿರುತ್ತದೆ :-

***"In case there is a violation of the provisions of the said rules in respect of collection of fees, prompt action is not taken by the District Level Education Regulation Authority. In fact, under sub-rule (2) of Rule 15, the said Authority has a power to take action suo motu or even on an oral camplaint made by any person interested. The entire object of the said rules will be defeated if the District Level Education Regulation Authority is not directed to dispose of the complaints either suo motu or otherwise within a specified time limit. There is an appeal provided against the order of the said Authority under Rule 17. Therefore, it will be appropriate if the state Government issues directions to all the***

***District Level Education regulating Authorities constituted under Rule 16 to ensure that the compaints or suo motu proceedings are disposed of within a particular time span.''***

ಮೇಲೆ ನ್ಯಾಯಾಲಯವು ನೀಡಿರುವ ಮಧ್ಯಂತರ ಆದೇಶದಲ್ಲಿ ಪ್ರಸ್ತಾಪಿಸಿರುವ ಅಂಶಗಳನ್ನು ಗಂಭೀರವಾಗಿ ಪರಿಗಣಿಸಿ ಎಲ್ಲಾ ಜಿಲ್ಲಾ ಶಿಕ್ಷಣ ನಿಯಂತ್ರಣ ಪ್ರಾಧಿಕಾರಗಳಲ್ಲಿ (DERA) ದಾಖಲಾಗಿರುವ/ದಾಖಲಾಗುವ ದೂರುಗಳನ್ನು ತ್ವರಿತಗತಿಯಲ್ಲಿ ಇತ್ಯರ್ಥಪಡಿಸಲು ಹಾಗೂ ಅದಷ್ಟೂ 3 ತಿಂಗಳ ಒಳಗೆ ಬಗೆಹರಿಸಲು ಕ್ರಮವಹಿಸುವಂತೆ ಈ ಮೂಲಕ ಸೂಚಿಸಿದೆ.

(ಎಂ.ಶರಣಬಸಪ್ಪ) 22/1/2020
ಸರ್ಕಾರದ ಅಧೀನ ಕಾರ್ಯದರ್ಶಿ,
(ಪ್ರಾಥಮಿಕ ಶಿಕ್ಷಣ)ಶಿಕ್ಷಣ ಇಲಾಖೆ.

**ಇವರಿಗೆ :-**

1) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
2) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ.
3) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.
4) ನಿರ್ದೇಶಕರು (ಪ್ರಾಥಮಿಕ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
5) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು.
6) ರಾಜ್ಯದ ಎಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರುಗಳು.

**ಪ್ರತಿ ಮಾಹಿತಿಗಾಗಿ ;**

1) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ.
2) ಸರ್ಕಾರದ ಜಂಟಿ ಕಾರ್ಯದರ್ಶಿ(ಆಡಳಿತ)/ಉಪ ಕಾರ್ಯದರ್ಶಿ(ಸೇವೆಗಳು), ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ.